# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 466
**ಮಾನ್ಯ ಸದಸ್ಯರ ಹೆಸರು** : ಶ್ರೀ ಬಿ.ಎಂ.ಫಾರೂಖ್
(ವಿಧಾನಸಭೆಯಿಂದ ಚುನಾಯಿತರಾದವರು)
**ಉತ್ತರಿಸಬೇಕಾದ ದಿನಾಂಕ** : 07-12-2023
**ಉತ್ತರಿಸುವ ಸಚಿವರು** : ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರಿನ ಕರಾವಳಿ ಕಡಲು ತೀರ ಪ್ರದೇಶದ ತಣ್ಣೀರು ಬಾವಿ ಹಾಗೂ ಸುಲ್ತಾನ ಬತ್ತೇರಿ ಸ್ಥಳಗಳು ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರನ್ನು ಆಕರ್ಷಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ಪ್ರವಾಸೋದ್ಯಮ ಹಾಗೂ ಈ ಸಂಬಂಧದ ಚಟುವಟಿಕೆಗಳಿಗೆ ಉತ್ತೇಜನ, ಪ್ರವಾಸಿಗರಿಗೆ ಅಗತ್ಯ ಸೌಲಭ್ಯಗಳನ್ನು ಅನುಕೂಲಗಳನ್ನು ಏರ್ಪಡಿಸುವ ಸಲುವಾಗಿ ಕೈಗೊಳ್ಳಲಾಗುವ ಕ್ರಮಗಳೇನು; (ವಿವರ ನೀಡುವುದು) | ಭಾರತ ಸರ್ಕಾರದ ಅರಣ್ಯ, ಪರಿಸರ ಮತ್ತು ಹವಾಮಾನ ಬದಲಾವಣೆ ಸಚಿವಾಲಯದ Beach Environment & Aesthetic Management Services (BEAMS) ಕಾರ್ಯಕ್ರಮದಡಿ ತಣ್ಣೀರುಬಾವಿ ಕಡಲ ತೀರವನ್ನು ಬ್ಲ್ಯೂಫ್ಲ್ಯಾಗ್ ಮಾನ್ಯತೆಗೆ ಗುರುತಿಸಲಾಗಿರುತ್ತದೆ. ಸದರಿ ಕಡಲ ತೀರದಲ್ಲಿ ಮೂಲಭೂತ ಸೌಕರ್ಯವನ್ನು ರೂ.7.59 ಕೋಟಿ ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲಾಗುತ್ತಿದೆ.<br><br>2017-18ನೇ ಸಾಲಿನಲ್ಲಿ ಮಂಗಳೂರು ತಾಲ್ಲೂಕಿನ ಸುಲ್ತಾನ್ ಭತ್ತೇರಿ ಕೋಟೆಯನ್ನು ಸಂಪರ್ಕಿಸುವ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ರೂ.125.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಲೋಕೋಪಯೋಗಿ ಇಲಾಖೆಯ ಮೂಲಕ ಕೈಗೊಳ್ಳಲು ಮಂಜೂರಾತಿ ನೀಡಲಾಗಿರುತ್ತದೆ. ಸದರಿ ಕಾಮಗಾರಿಗೆ ಮೊದಲನೇ ಕಂತಾಗಿ ರೂ.50.00 ಲಕ್ಷಗಳನ್ನು ಅನುಷ್ಠಾನ ಸಂಸ್ಥೆಗೆ ಬಿಡುಗಡೆ ಮಾಡಲಾಗಿದೆ ಮತ್ತು ಜಿಲ್ಲಾಧಿಕಾರಿಗಳು ಆಡಳಿತಾತ್ಮಕ ಅನುಮೋದನೆಯನ್ನು ನೀಡಿರುತ್ತಾರೆ. ಲೋಕೋಪಯೋಗಿ ಇಲಾಖೆರವರು ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ ಕಾಮಗಾರಿಯನ್ನು ಪ್ರಾರಂಭಿಸಿರುತ್ತಾರೆ. ಕಾಮಗಾರಿ ಪ್ರಗತಿಯಲ್ಲಿದೆ. |
| ಇ) | ಸದರಿ ಸ್ಥಳಗಳ ನಡುವಣ ಸೇತುವೆ, ರಸ್ತೆ ಅಗಲೀಕರಣ ಮುಂತಾಗಿ ಪ್ರಯಾಣಕ್ಕೆ ಪ್ರವಾಸಿಗರಿಗೆ ಅನುಕೂಲ ಮಾಡಿಕೊಡಲು ಸರ್ಕಾರ ಕೂಡಲೇ ಕ್ರಮ ಜರುಗಿಸಲು ಸಾಧ್ಯವೇ? | |

| | | |
|---|---|---|
| | | ಮಂಗಳೂರು ತಾಲ್ಲೂಕು ತಣ್ಣೀರುಬಾವಿ ಕಡಲತೀರಕ್ಕೆ ಸಂಪರ್ಕ ರಸ್ತೆ ದುರಸ್ಥಿ, ಅಗಲೀಕರಣ, ಕಾಂಕ್ರಿಟೀಕರಣ ಹಾಗೂ ಇತರೆ ಕಾಮಗಾರಿಯನ್ನು ರೂ.100.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೆಆರ್‌ಐಡಿಎಲ್ ಸಂಸ್ಥೆಯ ಮೂಲಕ ಕೈಗೊಳ್ಳಲು 2022-23ನೇ ಸಾಲಿನಲ್ಲಿ ಪರಿಷ್ಕೃತ ಮಂಜೂರಾತಿ ನೀಡಲಾಗಿರುತ್ತದೆ. ಸದರಿ ಕಾಮಗಾರಿಗೆ ಮೊದಲನೇ ಕಂತಾಗಿ ರೂ.33.00 ಲಕ್ಷಗಳನ್ನು ಹಾಗೂ ಎರಡನೇ ಕಂತಾಗಿ ರೂ.40.00 ಲಕ್ಷಗಳನ್ನು ಕೆಆರ್‌ಐಡಿಎಲ್ ಸಂಸ್ಥೆಗೆ ಬಿಡುಗಡೆ ಮಾಡಲಾಗಿದೆ ಮತ್ತು ಜಿಲ್ಲಾಧಿಕಾರಿಗಳು ಆಡಳಿತಾತ್ಮಕ ಅನುಮೋದನೆಯನ್ನು ನೀಡಿರುತ್ತಾರೆ. ಕಾಮಗಾರಿ ಪೂರ್ಣಗೊಂಡಿದೆ. |
| **ಈ)** | ಕೂಡಲೇ ಈ ಎರಡು ತಾಣಗಳನ್ನು ಅತ್ಯುತ್ತಮ ಪ್ರವಾಸಿ ತಾಣಗಳಾಗಿ ಅಭಿವೃದ್ಧಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ಸಂಪೂರ್ಣ ವಿವರ ನೀಡುವುದು) | ಇಲಾಖೆಗೆ ಒದಗಿಸುವ ಅನುದಾನದ ಲಭ್ಯತೆಗನುಗುಣವಾಗಿ ಸದರಿ ಪ್ರವಾಸಿ ತಾಣಗಳನ್ನು ಅತ್ಯುತ್ತಮ ಪ್ರವಾಸಿ ತಾಣಗಳಾಗಿ ಅಭಿವೃದ್ಧಿಪಡಿಸಲು ಪರಿಶೀಲಿಸಲಾಗುವುದು. |

**ಸಂಖ್ಯೆ: TOR 210 TDV 2023**

(ಎಚ್.ಕೆ.ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ
ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು.